ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1266
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ
3. ಉತ್ತರಿಸಬೇಕಾದ ದಿನಾಂಕ : 08.03.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಮೈಸೂರು ಸಕ್ಕರೆ ಕಂಪನಿಯನ್ನು ಸರ್ಕಾರಿ ಸ್ವಾಮ್ಯದಲ್ಲೇ ಆರಂಭಿಸುವ ಬಗ್ಗೆ ದಿನಾಂಕ : 18.10.2021 ರಲ್ಲಿ ಮುಖ್ಯಮಂತ್ರಿಗಳ ಸಭೆಯಲ್ಲಿ ಆದ ತೀರ್ಮಾನವೇನು: (ವಿವರ ನೀಡುವುದು)	ದಿ ಮೈಷುಗರ್ ಕಂಪನಿ ಲಿಮಿಟೆಡ್ ಮಂಡ್ಯ- ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಕುರಿತು ದಿನಾಂಕ:18.10.2021ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಜರುಗಿಸಲಾಗಿರುತ್ತದೆ. ಸದರಿ ಸಭೆಯಲ್ಲಿ ಈ ಕೆಳಕಂಡ ತೀರ್ಮಾನಗಳನ್ನು ಕೈಗೊಳ್ಳಲಾಗಿದೆ. 1. ಎಲ್.ಆರ್.ಓ.ಟಿ. ಆಧಾರದ ಮೇಲೆ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಸಂಬಂಧ ಈ ಹಿಂದೆ ಆಗಿರುವ ಸಚಿವ ಸಂಪುಟದ ನಿರ್ಣಯಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಸರ್ಕಾರಿ ಸ್ವಾಮ್ಯದಲ್ಲಿ ನಡೆಸಲು ಅನುಕೂಲವಾಗುವಂತೆ ನುರಿತ ತಾಂತ್ರಿಕ ಸಮಿತಿಯಿಂದ ವರದಿಯನ್ನು ಪಡೆದು, ಉನ್ನತ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿ ಹಾಗೂ ನುರಿತ ಆರ್ಥಿಕ ಸಲಹೆಗಾರರನ್ನು ನೇಮಿಸಿ ಮುಂದಿನ ಸಚಿವ ಸಂಪುಟದ ನಿರ್ಣಯಕ್ಕೆ ತಂದು ಪ್ರಾರಂಭಿಸುವುದು. 2. ಕಾರ್ಖಾನೆಯ ಯಂತ್ರೋಪಕರಣಗಳನ್ನು ದುರಸ್ತೀಕರಣಗೊಳಿಸಲು ತುರ್ತು ಅಗತ್ಯವಿರುವ ಹಣವನ್ನು ಸರ್ಕಾರದಿಂದ ಬಿಡುಗಡೆಗೊಳಿಸುವುದು. 3. ಕಾರ್ಖಾನೆಯ ಆಸ್ತಿಯು ಬೆಲೆ ಬಾಳುವುದಾಗಿದ್ದು, ಇದರ ಆಧಾರದ ಮೇಲೆ ಬಂಡವಾಳ ಪಡೆದು ನಡೆಸಬಹುದೇ ಎಂಬ ಬಗ್ಗೆ ಪರಿಶೀಲಿಸುವುದು. 4. ಈ ಹಿಂದೆ ಆಗಿರುವ ಲೋಪದೋಷಗಳನ್ನು ಗುರುತಿಸಿ ಸರಿಪಡಿಸಿಕೊಂಡು 2 ವರ್ಷಗಳ ಅವಧಿಗೆ ಪ್ರಾಯೋಗಿಕವಾಗಿ ಸರ್ಕಾರಿ ಸ್ವಾಮ್ಯದಲ್ಲಿ ನಡೆಸುವ ಬಗ್ಗೆ 03 ತಿಂಗಳೊಳಗಾಗಿ ತಾಂತ್ರಿಕ ವರದಿಯನ್ನು ಪಡೆದು ಸಚಿವ ಸಂಪುಟದಲ್ಲಿ ಮಂಡಿಸಿ, ಕಾರ್ಖಾನೆಯನ್ನು ಪ್ರಾರಂಭ ಮಾಡಲು ತೀರ್ಮಾನಿಸುವುದು.
(ಆ)	ಈ ಸಭೆ ನಡೆದು ನಾಲ್ಕು ತಿಂಗಳಾದರೂ ಕಾರ್ಖಾನೆಯನ್ನು ಪ್ರಾರಂಭಿಸುವ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :	ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:18.10.2021ರಂದು ಜರುಗಿದ ಸಭೆಯ ತೀರ್ಮಾನದಂತೆ ದಿ ಮೈಷುಗರ್ ಕಂಪನಿ ಲಿಮಿಟೆಡ್ ಮಂಡ್ಯ- ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
(ಇ)	ಬಂದಿದ್ದಲ್ಲಿ, ಶೀಘ್ರವಾಗಿ ಕಾರ್ಖಾನೆಯನ್ನು ಪ್ರಾರಂಭಿಸಲು 2022-23ನೇ ಸಾಲಿನ ಬಜೆಟ್‌ನಲ್ಲಿ ಹಣವನ್ನು ಮೀಸಲಿರಿಸಲಾಗಿದೆಯೇ : (ವಿವರ ನೀಡುವುದು):	ದಿ ಮೈಷುಗರ್ ಕಂಪನಿ ಲಿಮಿಟೆಡ್ ಮಂಡ್ಯ- ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಕುರಿತು 2022-23ನೇ ಸಾಲಿನ ಆಯವ್ಯಯದಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ. "2019-20ರಿಂದ ಸ್ಥಗಿತಗೊಂಡಿರುವ ಮೈಷುಗರ್ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ಸರ್ಕಾರವು ನಿರ್ಧರಿಸಿದ್ದು, ಈ ನಿಟ್ಟಿನಲ್ಲಿ ಮುಂದಿನ ಎರಡು ವರ್ಷಗಳ ಕಾಲ ಪ್ರಾಯೋಗಿಕವಾಗಿ ಸರ್ಕಾರದ ವತಿಯಿಂದ ಮೈಷುಗರ್ ಕಾರ್ಖಾನೆಯನ್ನು ನಡೆಸಲಾಗುವುದು. ಕಾರ್ಖಾನೆಯ ಯಂತ್ರೋಪಕರಣಗಳ ದುರಸ್ತಿಗಾಗಿ 50 ಕೋಟಿ ರೂ.ಗಳನ್ನು ಒದಗಿಸುವುದಲ್ಲದೆ ಹಣಕಾಸು ಸಂಸ್ಥೆಗಳಿಂದ ದುಡಿಯುವ ಬಂಡವಾಳವನ್ನು ಪಡೆಯಲು ವ್ಯವಸ್ಥೆ ಮಾಡಲಾಗುವುದು."

.....2

(ಈ)	ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯದಲ್ಲೇ ಶೀಘ್ರವಾಗಿ ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. 1. ಮೈಸೂರು ಸಕ್ಕರೆ ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯಧಲ್ಲಿ ನಡೆಸುವ ಸಂಬಂಧ ವರದಿಯನ್ನು ಪಡೆಯಲು ಸರ್ಕಾರದ ಆದೇಶ ಸಂಖ್ಯೆ: ಸಿಐ 334 ಸಿಓಎಫ್ 2021 ದಿನಾಂಕ:03.12.2021ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತಾಂತ್ರಿಕ ಸಲಹಾ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ. 2. ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಸಂಬಂಧ ಆಡಳಿತ, ಹಣಕಾಸು ಮತ್ತು ತಾಂತ್ರಿಕ ವಿಷಯಗಳಲ್ಲಿ ವರದಿಯನ್ನು ಪಡೆಯಲು ಮತ್ತು Operation and maintain (ಓ ಅಂಡ್ ಎಂ) ಆಧಾರದ ಮೇಲೆ ಕಾರ್ಖಾನೆಯನ್ನು ನಡೆಸುವ ಕುರಿತು ಟೆಂಡರ್ ಡಾಕ್ಯುಮೆಂಟ್ ಅನ್ನು ಸಿದ್ದಪಡಿಸುವುದಕ್ಕಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000ರಡಿಯಲ್ಲಿ 14 ದಿನಗಳ ಅಲ್ಪಾವಧಿ ಟೆಂಡರ್ ಕರೆದು ಕನ್ಸಲ್ಟೆನ್ಸಿ ಸೇವೆಯನ್ನು ಪಡೆಯಲು ಆದೇಶ ಸಂಖ್ಯೆ: ಸಿಐ 326 ಸಿಓಎಫ್ 2021 ದಿನಾಂಕ: 02.12.2021ರಲ್ಲಿ ಸರ್ಕಾರದ ಅನುಮತಿಯನ್ನು ನೀಡಲಾಗಿರುತ್ತದೆ. 3. ಅದರಂತೆ, ದಿ ಮೈಸೂರು ಷುಗರ್ ಕಂಪನಿ ಮಂಡ್ಯ ಇವರ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: MSCO/AC/CFO/147/2021-22 ದಿನಾಂಕ: 31.12.2021ರಂದು 14 ದಿನಗಳ ಅಲ್ಪಾವಧಿ ಟೆಂಡರ್ ಅನ್ನು ಆಹ್ವಾನಿಸಲಾಗಿತ್ತು. ಆದರೆ ಈ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ಬಿಡ್ಡುಗಳು ಸ್ವೀಕೃತಗೊಂಡಿರುವುದಿಲ್ಲ. 4. ಮರು ಟೆಂಡರ್ ಆಹ್ವಾನಿಸಲು ಸಮಯದ ಅಭಾವವಿರುವುದರಿಂದ ಸಕ್ಕರೆ ಉದ್ದಿಮೆಗಳಿಗೆ ತಾಂತ್ರಿಕ ವರದಿಯನ್ನು ತಯಾರಿಸುವ ಕನ್ಸಲ್ಟೆನ್ಸಿ ಸಂಸ್ಥೆಗಳಿಂದ ಸೇವೆಯನ್ನು ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕ ಅಧಿನಿಯಮ 1999 ರಡಿಯಲ್ಲಿ 4ಜಿ ವಿನಾಯಿತಿ ನೀಡುವಂತೆ ಮುಖ್ಯ ಹಣಕಾಸು ಅಧಿಕಾರಿ, ದಿ ಮೈಸೂರು ಷುಗರ್ ಕಂಪನಿ ಮಂಡ್ಯ ಇವರು ದಿನಾಂಕ: 03.02.2022ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. 5. ಅದರಂತೆ, M/s Rahi Techno Service, Pune ಇವರಿಂದ ತಾಂತ್ರಿಕ ವರದಿಯನ್ನು ಪಡೆದುಕೊಳ್ಳಲು ಆರ್ಥಿಕ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ: ಆಇ 105 ವೆಚ್ಚ-12 /2022, ದಿನಾಂಕ:21.02.2022ರಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕ ಅಧಿನಿಯಮ 1999 ರಡಿ 4ಜಿ ವಿನಾಯಿತಿ ನೀಡಿರುತ್ತದೆ. ಇದರನ್ವಯ ದಿ ಮೈಸೂರು ಷುಗರ್ ಕಂಪನಿಯು ದಿನಾಂಕ: 02.03.2022ರಂದು ಸದರಿ ಸಂಸ್ಥೆಗೆ ಕಾರ್ಯಾದೇಶವನ್ನು ನೀಡಿರುತ್ತದೆ. 6. ಪ್ರಸ್ತುತ ಮೈಸೂರು ಸಕ್ಕರೆ ಕಂಪನಿಯನ್ನು ಸರ್ಕಾರಿ ಸ್ವಾಮ್ಯದಲ್ಲಿ ಪುನಶ್ಚೇತನಗೊಳಿಸಿ, 2022-23 ನೇ ಸಾಲಿನ ಹಂಗಾಮಿನಿಂದ ಸದರಿ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸುವ ಸಂಬಂಧ ಭಾರತೀಯ ಆಡಳಿತ ಸೇವೆ / ಭಾರತೀಯ ಪೊಲೀಸ್ ಸೇವೆಯ ನಿವೃತ್ತ ಅಧಿಕಾರಿಯನ್ನು ಸಲಹೆಗಾರನ್ನಾಗಿ ನೇಮಿಸುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಸಿಐ 63 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೃಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು